# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 293 |
| ಮಾನ್ಯ ಸದಸ್ಯರ ಹೆಸರು | ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ |
| ಉತ್ತರಿಸಬೇಕಾದ ದಿನಾಂಕ | 06-03-2025 |
| ಉತ್ತರಿಸಬೇಕಾದವರು | ಸನ್ಮಾನ್ಯ ಮುಖ್ಯಮಂತ್ರಿಯವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಉತ್ತರ ಕನ್ನಡ ಜಿಲ್ಲೆಯಲ್ಲಿ ಬಹುತೇಕ ಬುಡಕಟ್ಟು ಜನಾಂಗದ ಹಳ್ಳಿಗಳು ಜನವಸತಿ ಕಾಲೋನಿ ರೂಪದಲ್ಲಿ ಇರದೆ ಒಂದೊಂದು ಮನೆಗಳು ದೂರ ದೂರದಲ್ಲಿ ಇರುವುದರಿಂದ ಸರಿಯಾದ ಕುಡಿಯುವ ನೀರಿನ ವ್ಯವಸ್ಥೆ ಇಲ್ಲದೆ ಹತ್ತಿರದ ಹಳ್ಳ, ನದಿ, ಬೆಟ್ಟದಿಂದ ಬರುವ ನೀರನ್ನೆ ಕುಡಿಯಲು ಉಪಯೋಗಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು; | ಬಂದಿದೆ. ಉತ್ತರ ಕನ್ನಡ ಜಿಲ್ಲೆಯಲ್ಲಿರುವ 119 ಹಾಡಿ/ಕಾಲೋನಿಗಳಿಗೆ ಕುಡಿಯುವ ನೀರಿನ ಸೌಲಭ್ಯ ಕಲ್ಪಿಸಲಾಗಿದೆ. ಒಂದು ಎರಡು ಮನೆ ನಿರ್ಮಿಸಿಕೊಂಡು ಅರಣ್ಯದಲ್ಲಿ ವಾಸಿಸುವ ಕುಟುಂಬಗಳಿಗೆ ಶಾಶ್ವತ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಲು ಅಗತ್ಯ ಕ್ರಮಕೈಗೊಳ್ಳಲಾಗುವುದು. |
| ಆ) | ಉತ್ತರ ಕನ್ನಡ ಜಿಲ್ಲೆಯ ಬುಡಕಟ್ಟು ಜನಾಂಗದವರ ಕುಡಿಯುವ ನೀರಿನ ಸಮಸ್ಯೆಗಾಗಿ ವಿಶೇಷ ಅನುದಾನ ಘೋಷಿಸಿ ಇವರಿಗೆ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸುವ ಯೋಜನೆ ಸರ್ಕಾರಕ್ಕೆ ಇದೆಯೇ; ಇದ್ದಲ್ಲಿ ಮುಂದಿನ ಕ್ರಮಗಳೇನು? | ಸದರಿ ಜಿಲ್ಲೆಯ ಬುಡಕಟ್ಟು ಜನಾಂಗದವರಿಗೆ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸುವ ಯೋಜನೆ ರೂಪಿಸಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು. |

**STW/SECB/STP/101/2025**

(ಸಿದ್ದರಾಮಯ್ಯ)
ಮುಖ್ಯಮಂತ್ರಿ